ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 115
ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 21.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	ಮೈಸೂರು ನಗರದ ನಜರಬಾದ್‌ನ ಮಸೀದಿ ರಸ್ತೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ.
ಆ)	ಸದರಿ ಶಾಲೆಯ ಕಾಂಪೌಂಡ್ ನಿರ್ಮಾಣ ಮಾಡಲು ಹಾಗೂ ಕುಸಿದು ಬಿದ್ದಿರುವ ಹಳೆಯ ಶಾಲಾ ಕಟ್ಟಡವನ್ನು ಸ್ವಚ್ಛಗೊಳಿಸಿ ವಿದ್ಯಾರ್ಥಿಗಳಿಗೆ ಆಟದ ಮೈದಾನ, ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೆಯೇ?	1. ಇತ್ತೀಚೆಗೆ ಮಳೆಯಿಂದ ಶಾಲಾ ಕೌಂಪೌಂಡ್ ಹಾನಿಯಾಗಿದ್ದು, ಇದರ ನಿರ್ಮಾಣವನ್ನು ರೂ.**7.00ಲಕ್ಷಗಳ** ಅಂದಾಜು ವೆಚ್ಚದಲ್ಲಿ ಮೈಸೂರು ಮಹಾನಗರ ಪಾಲಿಕೆಯ ಮೂಲಕ ಅನುಷ್ಠಾನಗೊಳಿಸಲು ಪಾಲಿಕೆಯ ಆಯುಕ್ತರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. 2. ಇತರೆ ಮೂಲಭೂತ ಸೌಕರ್ಯಗಳಾದ ಆಟದ ಮೈದಾನ ಮತ್ತು ಕುಡಿಯುವ ನೀರಿನ ಸೌಕರ್ಯ ಕಲ್ಪಿಸಲು **ರೂ.12.40ಲಕ್ಷದ** ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ ಜಿಲ್ಲಾಧಿಕಾರಿಗಳ ಮೂಲಕ ಸಿ.ಎಸ್.ಆರ್ ನಿಧಿಯಿಂದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಮವಹಿಸಲಾಗಿರುತ್ತದೆ.
ಇ)	ಶಾಲೆಯ ಸುತ್ತಲೂ ಸಾರ್ವಜನಿಕರು ಮಲಮೂತ್ರ ವಿಸರ್ಜನೆ ಮಾಡುತ್ತಿರುವುದರಿಂದ ಅನಾರೋಗ್ಯಕರ ಕಲುಷಿತ ವಾತಾವರಣ ನಿರ್ಮಾಣವಾಗಿದ್ದು, ಇದನ್ನು ಸ್ವಚ್ಚಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?	ಶಾಲೆಯ ಆವರಣವನ್ನು ಸ್ವಚ್ಛಗೊಳಿಸುವ ಸಂಬಂಧ ಮೈಸೂರು ಮಹಾನಗರಪಾಲಿಕೆವತಿಯಿಂದ ಕ್ರಮವಹಿಸಲಾಗುತ್ತಿದೆ.

ಈ)	ಪ್ರಸ್ತುತ ಈ ಶಾಲೆಯಲ್ಲಿ 1 ರಿಂದ 7ನೇ ತರಗತಿಯವರೆಗೆ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ಇದನ್ನು ಒಂದು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿಗೊಳಿಸಿ, ಹೆಚ್ಚು ಸಂಖ್ಯೆಯ ವಿದ್ಯಾರ್ಥಿಗಳು ಈ ಶಾಲೆಗೆ ಸೇರ್ಪಡೆಯಾಗಿ ವಿದ್ಯಾಭ್ಯಾಸ ಮಾಡುವಂತೆ ಕ್ರಮ ಜರುಗಿಸಲಾಗುವುದೇ?	1 ರಿಂದ 7ನೇ ತರಗತಿಯಲ್ಲಿ 29 ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ದಾಖಲಾತಿಯನ್ನು ಉತ್ತಮಪಡಿಸಲು ಮತ್ತು ಮಾದರಿ ಶಾಲೆಯನ್ನಾಗಿ ರೂಪಿಸಲು ಅಗತ್ಯ ಕ್ರಮವಹಿಸಲಾಗಿರುತ್ತದೆ.

ಇಪಿ 170 ಯೋಸಕ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು